## ಪ್ರಥಮ ದರ್ಜೆಯ ನ್ಯಾ ಯಿಕ ದಂಡಾಧಿಕಾರಿಗಳ ನ್ಯಾ ಯಾಲಯ, ಸೇಡಂ.

ಸಿ.ಸಿ. ನಂಃ 32/2021 ಸಿಡಬ್ಲೂ : 14 ಪಿಡಬ್ಲೂಃ 06

ಪ್ರಮಾಣವಚನ ಬೋಧಿಸಲಾಯಿತು ದಿಃ 30-10-2022

ಹೆಸರು : ಶಿವಾನಂದ

ತಂದೆ ಹೆಸರು : ಯಶ್ವಂತ

ವಯಸ್ಸು : 53 ವರ್ಷ

ಉದ್ಯೋಗ : ಎ ಎಸ್ ಐ ವಾಡಿ ಪೊಲೀಸ್ ಠಾಣೆ

ವಾಸಸ್ಥಳ : ಕಲಬುರಗಿ

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು ಸನ್ 2018 ರಿಂದ ಸನ್ 2022 ವರೆಗೆ ಸೇಡಂ ಪೋಲೀಸ್ ರ,ಾ ಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 10-08-2020 ರಂದು ಠಾಣೆ ಹಾಜರಾಗಿ ಪಿರ್ಯಾದಿಯನ್ನು ನೀಡಿರುತ್ತಾರೆ. ಸದರಿ ಪಿರ್ಯಾದಿಯ ಸಾರಾಂಶದ ಮೇರೆಗೆ ಠಾಣಾ 144/20 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನಾ ಯಾಲಯಕ್ಕೆ ಹಾಗೂ ಮೇಲಧಿಕಾರಿಯವರಿಗೆ ಕಳುಹಿಸಿರುತ್ತೇನೆ. ಸಾಕ್ಷಿಯು ಸದರಿ ಪಿರ್ಯಾದಿ ನೋಡಿ ಗುರುತಿಸಿರುತ್ತಾರೆ ಅದನ್ನು ಈಗಾಗಲೇ ನಿ ಪಿ 1 ಎಂದು ಗುರುತಿಸಾಗಿದೆ. ಅದರಲ್ಲಿರುವ ಸಾಕ್ಷ್ಮಿ ಯ ಸಹಿಯನ್ನು ನಿ ಪಿ 1(ಬಿ) ಮತ್ತು (ಸಿ) ಎಂದು ಗುರುತಿಸಲಾಯಿತು. ಪ್ರ ವ ವರದಿಯನ್ನು ನಿಪಿ 7 ಎಂದು ಗುರುತಿಸಲಾಯಿತು. ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 1 (ಎ) ಎಂದು ಗುರುತಿಸಲಾಯಿತು. ದಿ.11-08-2020 ರಂದು ಬೆಳಿಗ್ಗೆ 09-00 ರಿಂದ 10-30 ರ ವರೆಗೆ ಚಾ ಸಾ 5 ಮತ್ತು 6 ರವರ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ಮಾಡಿ ಮೊಟಾರು ಸೈಕಲನ್ನು ಜಪ್ತು ಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ಪಂಚನಾಮೆಯ ಅವಧಿಯಲ್ಲಿ ತೆಗೆದಿರುವ ಪೋಟೋವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಲೇ ನಿ ಪಿ 4 ಎಂದು ಗುರುತಿಸಲಾಗಿದೆ.

ನಂತರ ಅದೇ ದಿನ ಚಾಸಾ 8 ರಿಂದ 11 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಸದರಿ ಪ್ರಕರಣದ ಕಡತವನ್ನು ಮುಂದಿನ ತನಿಖೆಯ ಸಲುವಾಗಿ ಚಾ ಸಾ 15 ರವರಿಗೆ ವಹಿಸಿಕೊಟ್ಟಿರುತ್ತೇನೆ. ನಿ ಪಿ 8, 9, 10 ಮತ್ತು 11 ಆರೋಪಿಯ ಸಮ್ಮತಿಯ ಮೇರೆಗೆ ಗುರುತಿಸಲಾಯಿತು.

**ಪಾಟೀಸವಾಲುಃ** ಆರೋಪಿ ಪರ ಶ್ರೀ  ವಕೀಲರಿಂದಃ

ದಿಃ 10-08-2020 ರಂದು ಠಾಣೆ ಹಾಜರಾಗಿ ಪಿರ್ಯಾದಿಯನ್ನು ನೀಡಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಪಿರ್ಯಾದಿಯ ಸಾರಾಂಶದ ಮೇರೆಗೆ ಠಾಣಾ 144/20 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ ವ ವರದಿಯನ್ನು ಮಾನ್ಯ ನಾಯಾಲಯಕ್ಕೆ ಹಾಗೂ ಮೇಲಧಿಕಾರಿಯವರಿಗೆ ಕಳುಹಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿ.11-08-2020 ರಂದು ಬೆಳಿಗ್ಗೆ 09-00 ರಿಂದ 10-30 ರ ವರೆಗೆ ಚಾ ಸಾ 5 ಮತ್ತು 6 ರವರ ಸಮಕ್ಷಮ ಘಟನಾ ಸ್ಥಳದ ಪಂಚನಾಮೆಯನ್ನು ಮಾಡಿ ಮೋಟಾರು ಸೈಕಲನ್ನು ಜಪ್ತು ಪಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನಂತರ ಅದೇ ದಿನ ಚಾಸಾ 8 ರಿಂದ 11 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ಸದರಿ ಪ್ರಕರಣದ ಕಡತವನ್ನು ಮುಂದಿನ ತನಿಖೆಯ ಸಲುವಾಗಿ ಚಾ ಸಾ 15 ರವರಿಗೆ ವಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**